ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 28–09–2021**

# ಮಾಧ್ಯಮ ಆಹ್ವಾನ
# Media Invitation

**1. ಕರ್ನಾಟಕ ಮಾಧ್ಯಮ ಅಕಾಡೆಮಿ 40ರ ಸಂಭ್ರಮಾಚರಣೆ – ಲಾಂಛನ ಬಿಡುಗಡೆ ಹಾಗೂ 'ಕ್ಲಬ್ ಹೌಸ್' ಉದ್ಘಾಟನೆ:**

**ಉದ್ಘಾಟನೆ:**
**ಬಸವರಾಜ ಬೊಮ್ಮಾಯಿ,**
**ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ**

**ಅಧ್ಯಕ್ಷತೆ:**
**ಸದಾಶಿವ ಶೆಣೈ .ಕೆ.**
**ಅಧ್ಯಕ್ಷರು, ಕರ್ನಾಟಕ ಮಾಧ್ಯಮ ಅಕಾಡೆಮಿ**

**ದಿನಾಂಕ: 29–09–2021, ಬುಧವಾರ, ಸಮಯ: ಸಂಜೆ 4.00 ಗಂಟೆಗೆ**

**ಸ್ಥಳ: ಮುಖ್ಯಮಂತ್ರಿಗಳ ಗೃಹ ಕಛೇರಿ 'ಕೃಷ್ಣಾ', ಬೆಂಗಳೂರು.**

# ಪತ್ರಿಕಾ ಪ್ರಕಟಣೆ
**PRESS RELEASE**

## ವಸತಿರಹಿತರಿಗೆ ಮನೆಗಳ ನಿರ್ಮಾಣ : ಸಚಿವ ವಿ. ಸೋಮಣ್ಣ

ಬೆಂಗಳೂರು, ಸೆಪ್ಟಂಬರ್ 28 (ಕರ್ನಾಟಕ ಸರ್ಕಾರ):

ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯ ಸರ್ಕಾರಿ ಜಮೀನಿನಲ್ಲಿ 1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆಯ ಮೊದಲ ಹಂತವಾಗಿ 46,499 ಮನೆಗಳನ್ನು 5035.35 ಕೋಟಿ ರೂಗಳಿಗೆ ಗುತ್ತಿಗೆ ನೀಡಿ 8 ತಿಂಗಳಿನಲ್ಲಿ ಪೂರ್ಣಗೊಳಿಸಿ ವಸತಿ ರಹಿತರಿಗೆ ನೀಡಲಾಗುವುದು ಎಂದು ವಸತಿ ಸಚಿವ ವಿ. ಸೋಮಣ್ಣ ತಿಳಿಸಿದರು.

ಅವರು ಇಂದು ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮದವರನ್ನುದ್ದೇಶಿಸಿ ಮಾತನಾಡಿದ ಸಚಿವರು, ರಾಜ್ಯ ಸರ್ಕಾರದ ವಾಜಪೇಯಿ ನಗರ ವಸತಿ ಯೋಜನೆ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ ಭಾರತ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) – "ಸರ್ವರಿಗೂ ಸೂರು" ಯೋಜನೆಯಡಿ ಬೆಂಗಳೂರಿನಲ್ಲಿ ಆರ್ಥಿಕವಾಗಿ ಹಿಂದುಳಿದವರಿಗೆ ವಸತಿ ಯೋಜನೆ ಕೈಗೊಳ್ಳಲು ಸರ್ಕಾರ 2017 ರಲ್ಲಿ ಮಂಜೂರಾತಿ ನೀಡಿತ್ತು. ಬೆಂಗಳೂರು ನಗರ ಜಿಲ್ಲಾಧಿಕಾರಿಗಳು 1014 ಎಕರೆ 10 ಗುಂಟೆ ಜಮೀನನ್ನು ಮುಫತ್ತಾಗಿ ಗುರುತಿಸಿ ಮಂಜೂರು ಮಾಡಿದೆ. ಈ ಪೈಕಿ 553 ಎಕರೆ 15 ಗುಂಟೆ ಜಮೀನು ರಾಜೀವ್‌ಗಾಂಧಿ ವಸತಿ ನಿಗಮಕ್ಕೆ ಹಸ್ತಾಂತರಗೊಂಡಿದೆ.

ಮೊದಲನೇ ಹಂತದಲ್ಲಿ ಬರುವ 46,499 (ಜಿ+3 ಇಂದ ಎಸ್+14) ಬಹುಮಹಡಿ ಮನೆಗಳನ್ನು ಮೂಲಭೂತ ಸೌಕರ್ಯದೊಂದಿಗೆ ರೂ. 5035.35 ಕೋಟಿ ವೆಚ್ಚದಲ್ಲಿ ನಿರ್ಮಿಸಲು 10 ಪ್ಯಾಕೇಜ್‌ಗಳನ್ನು ಗುತ್ತಿಗೆದಾರಿಗೆ ವಹಿಸಿ ಈಗಾಗಲೇ ಕಾಮಗಾರಿ ಆರಂಭಿಸಲಾಗಿದೆ. ಇವುಗಳಲ್ಲಿ 38,403 ಒಂದು ಬಿಎಚ್‌ಕೆ ಮನೆಗಳಾದರೆ, 8096 ಎರಡು ಬಿಎಚ್‌ಕೆ ಮನೆಗಳಾಗಿವೆ. ಗುತ್ತಿಗೆದಾರರು 313 ಎಕರೆಯಲ್ಲಿ 42,988 ಮನೆಗಳ ಕಾಮಗಾರಿ ಪ್ರಾರಂಭಿಸಿದ್ದಾರೆ ಎಂದರು.

ಸರ್ಕಾರವು 2020ರಲ್ಲಿ ಆದೇಶಿಸಿರುವಂತೆ ಎರಡನೇ ಹಂತದಲ್ಲಿ ಬರು 53,501 ಮನೆಗಳನ್ನು (ಜಿ+3) ಮಾದರಿಯಲ್ಲಿ ನಿರ್ಮಿಸಲು ಕ್ರಮಕೈಗೊಳ್ಳಲಿದ್ದು, ಪ್ರತಿ ಮನೆಯ ವೆಚ್ಚ ಎಸ್‌ಸಿಎಸ್‌ಟಿ ಕುಟುಂಬಗಳಿಗೆ 5 ಲಕ್ಷ ಹಾಗೂ ಇತರರಿಗೆ 5.50 ಲಕ್ಷ ನಿಗದಿಪಡಿಸಲಾಗಿದೆ. ಖರೀದಿಸುವವರು 1 ಲಕ್ಷ ರೂ ಪಾವತಿಸಿದರೆ, ಮಿಕ್ಕ 4 ಲಕ್ಷ ರೂಗಳನ್ನು ಬ್ಯಾಂಕ್ ಮೂಲಕ ಸಾಲ ಪಡೆದುಕೊಳ್ಳಬಹುದು. ಹೊಸದಾಗಿ ಬಹುಮಹಡಿ ಮನೆಗಳ ಬೇಡಿಕೆಗಾಗಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸ್ವೀಕರಿಸುವ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ದಿನಾಂಕ 21-10-2021ರ ಒಳಗಾಗಿ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿದೆ. ಇಲ್ಲಿಯವರೆಗೆ 20,156 ಅರ್ಜಿಗಳನ್ನು ಸ್ವೀಕರಿಸಲಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಚಿವರಾದ ಎಸ್. ಟಿ. ಸೋಮಶೇಖರ್, ಗೋಪಾಲಯ್ಯ, ಭೈರತಿ ಬರಸವರಾಜು, ಶಾಸಕರಾದ ರವಿಸುಬ್ರಮಣ್ಯ ಹಾಗೂ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಮಾಸಿಕ ಪಾಸುಗಳ ವಿತರಣೆ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು, ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ರಿಯಾಯಿತಿ ದರದಲ್ಲಿ ಕ್ಯಾಲೆಂಡರ್ ಮಾಹೆಗನುಗುಣವಾಗಿ ಮಾಸಿಕ ಪಾಸುಗಳನ್ನು ವಿತರಣೆ ಮಾಡಲಾಗುತ್ತಿದೆ.

ಮಾಸಿಕ ಪಾಸುಗಳಲ್ಲಿ ಪ್ರಯಾಣಿಕರು ಅನಿಯಮಿತವಾಗಿ ಪ್ರಯಾಣಿಸಬಹುದಾಗಿದ್ದು, ಅಕ್ಟೋಬರ್-2021 ರ ಮಾಹೆಯ ಮಾಸಿಕ ಪಾಸುಗಳನ್ನು ಸೆಪ್ಟೆಂಬರ್ 28, 2021 ರಿಂದ ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಸಾರ್ವಜನಿಕರಿಗೆ ಸುಲಭವಾಗಿ ಹಾಗೂ ತ್ವರಿತವಾಗಿ ಮಾಸಿಕ ಪಾಸುಗಳು ದೊರಕಲು ಅನುಕೂಲವಾಗುವಂತೆ ಈ ಕ್ರಮಗಳನ್ನು ಕೈಗೊಳ್ಳಲಾಗಿದೆ.

**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಟಿಟಿಎಂಸಿ ಮತ್ತು ಬಸ್ ನಿಲ್ದಾಣಗಳಲ್ಲಿ ಮಾಸಿಕ ಪಾಸುಗಳನ್ನು ವಿತರಣೆ ಮಾಡಲಾಗುವುದು ಹಾಗೂ ಬೆಂಗಳೂರು ಒನ್ ಕೇಂದ್ರಗಳ ಮೂಲಕ ಮಾಸಿಕ ಪಾಸುಗಳು ವಿತರಿಸಲಾಗುತ್ತಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## Issuance of Monthly passes

Bengaluru, September (karnataka Information):

BMTC is issuing monthly passes at discount rate according to calendar months for the benefit of public passengers.

October-2021 monthly passes will be issued from 28.09.2021. Further, for quick and easy availability of monthly passes the following measures are been initiated. BMTC is issuing monthly passes at TTMCs and bus stands, All Bengaluru One Centers.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ಅಕ್ಟೋಬರ್ 3 ರಂದು ಧಾರವಾಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## ಬೆಂಗಳೂರು ಮತ್ತು ಬೆಳಗಾವಿ ಜಿಲ್ಲೆಯ ಪರೀಕ್ಷಾ ಉಪಕೇಂದ್ರಗಳಲ್ಲಿ ಕನ್ನಡ ಭಾಷಾ ಪರೀಕ್ಷೆ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):

ಕರ್ನಾಟಕ ಲೋಕ ಸೇವಾ ಆಯೋಗವು 2019ನೇ ಸಾಲಿನ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಮತ್ತು ಕರ್ನಾಟಕ ಭವನ ದೆಹಲಿಯ ಉಳಿಕೆ ಮೂಲ ವೃಂದದ ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ ಸಹಾಯಕ/ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ದಿನಾಂಕ: 24-07-2021 ರ ಪರಿಷ್ಕೃತ ತಿದ್ದುಪಡಿ ಅಧಿಸೂಚನೆಯಲ್ಲಿ ಮತ್ತು ದಿನಾಂಕ: 09-09-2021 ರಂದು ಪ್ರಕಟಿಸಲಾದ ಅರ್ಹತಾ ಪಟ್ಟಿಯಲ್ಲಿ ತಿಳಿಸಿರುವಂತೆ, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯ್ತಿ ಪಡೆಯದ ಅಭ್ಯರ್ಥಿಗಳ ಹೆಸರು, ನೋಂದಣಿ ಸಂಖ್ಯೆ ಮುಂದೆ '***' ಎಂದು ನಮೂದಿಸಿದ್ದು, ಈ ಅಭ್ಯರ್ಥಿಗಳಿಗೆ ದಿನಾಂಕ: 08-10-2021 (ಶುಕ್ರವಾರ) ದಂದು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಬೆಂಗಳೂರು ಮತ್ತು ಬೆಳಗಾವಿ ಜಿಲ್ಲೆಯ ಪರೀಕ್ಷಾ ಉಪಕೇಂದ್ರಗಳಲ್ಲಿ ನಡೆಸಲು ಉದ್ದೇಶಿಸಲಾಗಿದೆ.

ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಶೀಘ್ರವಾಗಿ ಅವಕಾಶ ಕಲ್ಪಿಸಲಾಗುವುದು. ದಿನಾಂಕ: 09-09-2021 ಅರ್ಹತಾ ಪಟ್ಟಿಯಲ್ಲಿ ತಿಳಿಸಿರುವಂತೆ, ಪ್ರಸ್ತುತ ದಿನಾಂಕ: 08-10-2021 ರಂದು ನಡೆಯಲಿರುವ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಬರೆಯಬೇಕಾಗಿರುವ ಅಭ್ಯರ್ಥಿಗಳ ಅರ್ಹತೆಯು ಈ ಪರೀಕ್ಷೆಯ ಫಲಿತಾಂಶಕ್ಕೆ ಒಳಪಟ್ಟಿರುವುದರಿಂದ ಮತ್ತು ಅದರ ಫಲಿತಾಂಶದ ನಂತರವೇ ಮೂಲದಾಖಲೆಗಳ ಪರಿಶೀಲನೆಯ ಕಾರ್ಯವನ್ನು ನಡೆಸಲಾಗುವುದರಿಂದ ಅಂತಹ ಅಭ್ಯರ್ಥಿಗಳು ಕಡ್ಡಾಯವಾಗಿ ದಿನಾಂಕ: 08-10-2021 ರಂದು ನಡೆಯುವ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗೆ ಹಾಜರಾಗಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಖೇಲೋ ಇಂಡಿಯಾ ಯೂನಿವರ್ಸಿಟಿ ಗೇಮ್ಸ್-2021

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):

ಬೆಂಗಳೂರಿನಲ್ಲಿ ಖೇಲೋ ಇಂಡಿಯಾ ಯೂನಿವರ್ಸಿಟಿ ಗೇಮ್ಸ್-2021 ಅನ್ನು ಯಶಸ್ವಿಯಾಗಿ ಆಯೋಜಿಸಲು ಸರ್ಕಾರವು, ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಕಾರ್ಯಕಾರಿ ಸಮಿತಿ (Executive Committee) ಹಾಗೂ ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಕ್ರೀಡಾಕೂಟದ ವ್ಯವಸ್ಥಪನಾ ಸಮಿತಿ (Games Management Committee) ಯನ್ನು ರಚಿಸಿ ದಿನಾಂಕ: 28-09-2021ರಂದು ಆದೇಶ ಹೊರಡಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಡಿಪ್ಲೊಮಾ ಪರೀಕ್ಷೆಗಳ ಫಲಿತಾಂಶ ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):

2021ರ ಆಗಸ್ಟ್ ತಿಂಗಳಲ್ಲಿ ನಡೆದ ತಾಂತ್ರಿಕ ಪರೀಕ್ಷಾ ಮಂಡಳಿಯ ಡಿಪ್ಲೊಮಾ ಪರೀಕ್ಷೆಗಳ ಫಲಿತಾಂಶಗಳನ್ನು ದಿನಾಂಕ: 29–09–2021ರಂದು ಬುಧವಾರ ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳಲ್ಲಿ ಅಪರಾಹ್ನ 3.00 ಗಂಟೆಗೆ ಪ್ರಕಟಿಸಲಾಗುವುದು ಹಾಗೂ ಫಲಿತಂಶವು www.bteresults.net ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.